**All India Radio: Bangalore**
**Regional Bulletin In Kannada**
**23.02.2025 / 2.30 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಯುವಕರಲ್ಲಿ ಹೆಚ್ಚುತ್ತಿರುವ ಸ್ಥೂಲ ಕಾಯದ ಬಗ್ಗೆ ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಕಳವಳ

೨. ಕರ್ನಾಟಕದ ಹುಲಿ ವೇಷ, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಸೋಲಿಗರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಪ್ರಧಾನಿ

೩. ತುಮಕೂರಿನ ಚಿಂಕಾರ ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆ ಸ್ಥಗಿತಗೊಳಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹ

೪. ದುಬೈನಲ್ಲಿಂದು ಭಾರತ-ಪಾಕ್ ಕ್ರಿಕೆಟ್ ಹಣಾಹಣಿ; ಟಾಸ್ ಗೆದ್ದ ಪಾಕಿಸ್ತಾನ ಬ್ಯಾಟಿಂಗ್ ಆಯ್ಕೆ

****************

ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಯುವ ಪೀಳಿಗೆಯ ಹೆಚ್ಚುತ್ತಿರುವ ಪಾಲ್ಗೊಳ್ಳುವಿಕೆ, ದೇಶದಲ್ಲಿ ಹೊಸ ಕ್ರಾಂತಿಯನ್ನುಂಟು ಮಾಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ.

ತಮ್ಮ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದ ೧೧೯ನೇ ಆವೃತ್ತಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಹಲವು ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿದ್ದಾರೆ.

ಪ್ರಸ್ತುತ ೧೦ನೇ ತರಗತಿ ಹಾಗೂ ಪಿಯುಸಿ ಸೇರಿದಂತೆ ವಿವಿಧ ಪರೀಕ್ಷೆಗಳನ್ನು ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಶುಭ ಹಾರೈಸಿರುವ ಪ್ರಧಾನಿ, ಯಾವುದೇ ಒತ್ತಡವಿಲ್ಲದೆ ಪೂರ್ಣ ಧನಾತ್ಮಕ ಮನೋಭಾವದಿಂದ ಪರೀಕ್ಷೆಯನ್ನು ಎದುರಿಸಿ ಎಂದು ಧೈರ್ಯ ತುಂಬಿದ್ದಾರೆ.

ಧ್ವನಿ: ಪ್ರಧಾನಿ ಮೋದಿ

ಜೀವನದಲ್ಲಿ ಕ್ರೀಡೆಯ ಮಹತ್ವದ ಬಗ್ಗೆ ತಿಳಿಸಿದ ಪ್ರಧಾನಿ, ಸ್ಥೂಲಕಾಯತೆ ಗಂಭೀರತೆ ಕುರಿತು ಪ್ರಸ್ತಾಪಿಸಿ, ಆರೋಗ್ಯಪೂರ್ಣ ಮತ್ತು ಸದೃಢ ದೇಶದ ನಿರ್ಮಾಣದ ಹಾದಿಯಲ್ಲಿ ಸ್ಥೂಲಕಾಯತೆ ಒಂದು ಸವಾಲಾಗಿದೆ ಎಂದು ತಿಳಿಸಿದ್ದಾರೆ. ಈ ಸಮಸ್ಯೆಯನ್ನು ಎದುರಿಸಲು ಒಂದು ಉಪಯುಕ್ತ ವಿಧಾನದ ಸಲಹೆ ನೀಡಿದ ಅವರು, ಅಡುಗೆಗೆ ಎಣ್ಣೆಯ ಬಳಕೆಯನ್ನು ಶೇಕಡಾ ೧೦ ರಷ್ಟು ಕಡಿಮೆ ಮಾಡುವ ನಿರ್ಧಾರ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಬಳಿಕ ಪ್ರಧಾನಿ, ಸ್ಥೂಲಕಾಯತೆಯನ್ನು ಸಮರ್ಥವಾಗಿ ಎದುರಿಸಲು ಹಾಗೂ ಆರೋಗ್ಯಪೂರ್ಣ ಬದುಕು ಸಾಗಿಸುವ ಕುರಿತಂತೆ ಒಲಿಂಪಿಕ್ ಪದಕ ವಿಜೇತ ನೀರಜ್ ಚೋಪ್ರಾ, ಖ್ಯಾತ ಅಥ್ಲೀಟ್ ನಿಖತ್ ಜರೀನ್, ಬೆಂಗಳೂರಿನ ಖ್ಯಾತ ಹೃದ್ರೋಗ ತಜ್ಞ ಡಾ.ದೇವಿ ಶೆಟ್ಟಿ ನೀಡಿರುವ ಸಲಹೆಗಳ ಧ್ವನಿ ಮುದ್ರಣಗಳನ್ನು ಕೇಳುಗರಿಗೆ ಪ್ರಸ್ತುತಪಡಿಸಿದರು. ದೇವಿ ಶೆಟ್ಟಿ ಮಾತನಾಡಿ, ಯುವಜನತೆ ಆದಷ್ಟು ವ್ಯಾಯಾಮಗಳನ್ನು ಮಾಡುವಂತೆ ಸಲಹೆ ನೀಡಿದ್ದಾರೆ. ಆದಷ್ಟು ಆಹಾರ ಪದ್ಧತಿಯಲ್ಲಿ ಅನ್ನ, ಚಪಾತಿ, ಸಕ್ಕರೆ ಪ್ರಮಾಣ ಕಡಿಮೆ ಮಾಡುವಂತೆ ಸೂಚಿಸಿದ್ದಾರೆ.

ಧ್ವನಿ: ದೇವಿ ಶೆಟ್ಟಿ

ಭಾರತ ಅತ್ಯಂತ ರೋಮಾಂಚಕ ಸಸ್ಯ ಮತ್ತು ಪ್ರಾಣಿಗಳ ಪರಿಸರ ವ್ಯವಸ್ಥೆ ಹೊಂದಿದೆ. ಇದರ ಜೊತೆಗೆ ವನ್ಯಜೀವಿಗಳು ನಮ್ಮ ಇತಿಹಾಸ ಮತ್ತು ಸಂಸ್ಕೃತಿಯಲ್ಲಿ ಅಂತರ್ಗತವಾಗಿವೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಹುಲಿವೇಷ, ತಮಿಳುನಾಡಿನ ಪುಲಿ ಮತ್ತು ಕೇರಳದ ಪುಲಿಕ್ಕಳಿ ಯಂತಹ ಅನೇಕ ಸಾಂಸ್ಕೃತಿಕ ನೃತ್ಯಗಳು, ಪ್ರಕೃತಿ ಮತ್ತು ವನ್ಯಜೀವಿಗಳೊಂದಿಗೆ ಸಂಬಂಧ ಹೊಂದಿವೆ ಎಂದು ತಿಳಿಸಿದ್ದಾರೆ.

ಧ್ವನಿ: ಪ್ರಧಾನಿ ಮೋದಿ

ಕರ್ನಾಟಕದ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹುಲಿಗಳ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ ಎಂದು ಹರ್ಷ ವ್ಯಕ್ತಪಡಿಸಿದ ಅವರು, ಹುಲಿಯನ್ನು ಪೂಜಿಸುವ ಸೋಲಿಗ ಬುಡಕಟ್ಟು ಜನಾಂಗದವರಿಗೆ ಇದರ ಶ್ರೇಯಸ್ಸು ಸಲ್ಲುತ್ತದೆ ಎಂದು ಕೊಂಡಾಡಿದ್ದಾರೆ.

ಧ್ವನಿ: ಪ್ರಧಾನಿಮೋದಿ

ಉತ್ತರಾಖಂಡದಲ್ಲಿ ನಡೆದ ರಾಷ್ಟ್ರೀಯ ಕ್ರೀಡಾಕೂಟದ ಬಗ್ಗೆ ಉಲ್ಲೇಖಿಸಿದ ಪ್ರಧಾನಿ, ಈ ಕ್ರೀಡಾಕೂಟದಲ್ಲಿ ದೇಶಾದ್ಯಂತದ ೧೧ ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಅದ್ಭುತ ಪ್ರದರ್ಶನ ನೀಡಿದ್ದಾರೆ.

ಕ್ರೀಡಾಕೂಟದಲ್ಲಿ ಅದ್ಭುತ ಪ್ರದರ್ಶನ ತೋರಿದ ಕರ್ನಾಟಕದ ಈಜುಗಾರ್ತಿ ಧಿನಿಧಿ ದೇಸಿಂಗು, ಆಂಧ್ರ ಪ್ರದೇಶದ ಜ್ಯೋತಿ ಯಾರ್ರಾಜಿ ಸೇರಿದಂತೆ ಹಲವು ರಾಜ್ಯಗಳ ಕ್ರೀಡಾಪಟುಗಳು ದೇಶಕ್ಕೆ ಹೊಸ ಭರವಸೆ ನೀಡಿದ್ದಾರೆ. ಯುವ ಕ್ರೀಡಾಪಟುಗಳ ದೃಢನಿಶ್ಚಯ ಮತ್ತು ಶಿಸ್ತಿನಿಂದ ಭಾರತ ಇಂದು ಜಾಗತಿಕ ಕ್ರೀಡಾ ಶಕ್ತಿ ಕೇಂದ್ರವಾಗುವ ನಿಟ್ಟಿನಲ್ಲಿ ಕ್ಷಿಪ್ರಗತಿಯಿಂದ ಸಾಗುತ್ತಿದೆ ಎಂದರು.

ಇಸ್ರೋ ಯಶಸ್ಸಿನ ಬಗ್ಗೆ ಕೊಂಡಾಡಿದ ಪ್ರಧಾನಿ, ಬಾಹ್ಯಾಕಾಶ ವಿಜ್ಞಾನದಲ್ಲಿನ ಸಾಧನೆ, ಉಡಾವಣಾ ವಾಹನಗಳ ತಯಾರಿಕೆ, ಚಂದ್ರಯಾನ, ಮಂಗಳಯಾನ, ಆದಿತ್ಯ ಎಲ್-೧ ರ ಯಶಸ್ಸು ಅಥವಾ ಒಂದೇ ರಾಕೆಟ್ ಮೂಲಕ ೧೦೪ ಉಪಗ್ರಹಗಳನ್ನು ಒಂದೇ ಬಾರಿಗೆ ಬಾಹ್ಯಾಕಾಶಕ್ಕೆ ಕಳುಹಿಸುವ ಅಭೂತಪೂರ್ವ ಧ್ಯೇಯವಾಗಲಿ ಎಂದು ಪ್ರತಿಪಾದಿಸಿದ್ದಾರೆ. ಕಳೆದ ೧೦ ವರ್ಷಗಳಲ್ಲಿ ಸುಮಾರು ೪೬೦ ಉಪಗ್ರಹಗಳನ್ನು ಉಡಾವಣೆ ಮಾಡಲಾಗಿದೆ ಎಂದು ಪ್ರಧಾನಿ ಶ್ಲಾಘಿಸಿದ್ದಾರೆ.

****************

ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿಯ ಚಿಂಕಾರ ಅರಣ್ಯ ಪ್ರದೇಶ ಗಣಿಗಾರಿಕೆಗೆ ಸೂಕ್ತವಲ್ಲ ಎಂದು ರಾಜ್ಯ ಸರ್ಕಾರದ ದೆಹಲಿ ಪ್ರತಿನಿಧಿ ಟಿ.ಬಿ.ಜಯಚಂದ್ರ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿಂಕಾರ ಸೂಕ್ಷ್ಮ ವಲಯವಾಗಿದ್ದು, ಅಲ್ಲಿರುವ ಅರಣ್ಯ ಪ್ರದೇಶ ಉಳಿಯಬೇಕು. ಪರಿಸರ ಸೂಕ್ಷ್ಮ ಪ್ರದೇಶವಾಗಿರುವ ಚಿಂಕಾರ ಗಣಿಗಾರಿಕೆಗೆ ಸೂಕ್ತ ಪ್ರದೇಶವಲ್ಲ. ಕರಡಿ, ಜಿಂಕೆ ಸೇರಿದಂತೆ ಎಲ್ಲಾ ಪ್ರಾಣಿಗಳ ಆಶ್ರಯ ತಾಣವಾಗಿರುವ ಈ ಅರಣ್ಯದ ರಕ್ಷಣೆಗೆ ಮುಂದಾಗಬೇಕು ಎಂದು ತಿಳಿಸಿದ್ದಾರೆ.

****************

ರಾಜ್ಯದಲ್ಲಿ ಸರ್ಕಾರದಿಂದ ಪರಿಸರ ಹಾಗೂ ಅರಣ್ಯ ಸಂರಕ್ಷಿಸುವ ನಿಟ್ಟಿನಲ್ಲಿ ಬದ್ಧತೆಯ ಕೊರತೆ ಎದ್ದು ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಾಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ತುಮಕೂರು ಜಿಲ್ಲೆಯ ಬುಕ್ಕಾಪಟ್ಟಣ ಬಳಿಯ ಚಿಂಕಾರದಲ್ಲಿ ಸಚಿವರ ಗಮನಕ್ಕೂ ಬಾರದಂತೆ ಅಧಿಕಾರಿಗಳು ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ೧೨೦ ಎಕರೆ ಪ್ರದೇಶದಲ್ಲಿ ಕಬ್ಬಿಣದ ಅದಿರು ಗಣಿಗಾರಿಕೆ ನಡೆಸಲು ಶಿಫಾರಸ್ಸು ಮಾಡಲಾಗಿದೆ ಎಂದು ದೂರಿದ್ದಾರೆ.

ಕೂಡಲೇ ಸರ್ಕಾರ ಚಿಂಕಾರದಲ್ಲಿನ ಗಣಿಗಾರಿಕೆ ಸ್ಥಗಿತಗೊಳಿಸುವಂತೆ ಅವರು ಆಗ್ರಹಿಸಿದ್ದಾರೆ.

****************

ಉತ್ತರ ಕನ್ನಡ ಜಿಲ್ಲೆಯ ಕದಂಬೋತ್ಸವವನ್ನು ಬನವಾಸಿಯಲ್ಲಿ ಏಪ್ರಿಲ್ ೧೨ ಮತ್ತು ೧೩ ರಂದು ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಅಧಿಕೃತವಾಗಿ ಘೋಷಿಸಿದ್ದಾರೆ.

ಶಿರಸಿ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಶಾಸಕ ಶಿವರಾಮ್ ಹೆಬ್ಬಾರ್ ಕದಂಬೋತ್ಸವದಲ್ಲಿ ರಾಷ್ಟ್ರ, ರಾಜ್ಯ ಮಟ್ಟದ ಮೇರು ಕಲಾವಿದರು ಮತ್ತು ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಕಳೆದ ಬಾರಿ ಅರ್ಜಿ ಹಾಕಿ ಅವಕಾಶ ದೊರೆಯದ ಕಲಾವಿದರಿಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದ್ದಾರೆ. ಈ ಬಾರಿಯ ಪಂಪ ಪ್ರಶಸ್ತಿಯನ್ನು ಕದಂಬೋತ್ಸವ ವೇದಿಕೆಯಲ್ಲಿಯೇ ನೀಡಲಾಗುವುದು ಎಂದು ತಿಳಿಸಿದ್ದಾರೆ. ಶಾಸಕ ಭೀಮಣ್ಣ ನಾಯ್ಕ ಮಾತನಾಡಿ, ಕದಂಬೋತ್ಸವ ಪ್ರತಿಯೊಬ್ಬರ ಉತ್ಸವವಾಗಬೇಕು ಎಂದು ಹೇಳಿದ್ದಾರೆ.

****************

ದುಬೈನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಭಾರತ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಾಕಿಸ್ತಾನ ತಂಡದ ನಾಯಕ ಮೊಹಮ್ಮದ್ ರಿಜ್ವಾನ್ ಬ್ಯಾಟಿಂಗ್ ಆಯ್ದುಕೊಂಡಿದ್ದಾರೆ. ಪಾಕಿಸ್ತಾನ ತಂಡದಲ್ಲಿ ಒಂದು ಬದಲಾವಣೆ ಮಾಡಲಾಗಿದ್ದು, ಇಮಾಮ್-ಉಲ್-ಹಕ್‌ಗೆ ಸ್ಥಾನ ನೀಡಲಾಗಿದೆ. ಭಾರತ ತಂಡದಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. ಇತ್ತೀಚಿನ ವರದಿ ಬಂದಾಗ ಪಾಕಿಸ್ತಾನ ೧ ಓವರ್‌ನಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ, ೬ ರನ್ ಗಳಿಸಿ ಆಡುತ್ತಿದೆ. ಬಾಂಗ್ಲಾದೇಶದ ವಿರುದ್ಧ ನಡೆದ ಮೊದಲ ಪಂದ್ಯದಲ್ಲಿ ಭಾರತ ಈಗಾಗಲೇ ಗೆಲುವು ಸಾಧಿಸಿದೆ.

****************

ಮಾರ್ಚ್ ೮ ರಂದು ಬಳ್ಳಾರಿಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಬುಡಕಟ್ಟು ಸಮುದಾಯದ ಭಾಷೆ, ಕಲೆ, ಸಂಸ್ಕೃತಿ, ಆಚಾರ-ವಿಚಾರ ಮತ್ತು ಉಡುಗೆ-ತೊಡುಗೆ ಬಿಂಬಿಸುವ ರಾಜ್ಯಮಟ್ಟದ 'ಬುಡಕಟ್ಟು ಉತ್ಸವ' ಆಯೋಜಿಸಲಾಗಿದೆ. ೨೦೨೪-೨೫ನೇ ಸಾಲಿನ ಪರಿಷ್ಟ ಪಂಗಡ ಉಪಯೋಜನೆಯಡಿ ಈ ಉತ್ಸವ ನಡೆಯಲಿದೆ. ರಾಜ್ಯದ ವಿವಿಧೆಡೆಯಿಂದ ೬೦೦ ಕ್ಕೂ ಹೆಚ್ಚು ಕಲಾವಿದರು ಪಾಲ್ಗೊಳ್ಳಲಿದ್ದಾರೆ. ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ತಿಳಿಸಿದ್ದಾರೆ.

****************

ಸಂಕ್ಷಿಪ್ತ ಸುದ್ದಿಗಳು

೧. ಚಿತ್ರದುರ್ಗ ಜಿಲ್ಲೆಯಲ್ಲಿ ಇ-ಖಾತಾ ಅಭಿಯಾನ ಮತ್ತು ಸಹಾಯವಾಣಿ ಕೇಂದ್ರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ ನೀಡಿದ್ದಾರೆ.

೨. ಚಿಕ್ಕಬಳ್ಳಾಪುರ ನಗರಸಭಾ ವ್ಯಾಪ್ತಿಯಲ್ಲಿ ಫೆಬ್ರವರಿ ೨೦ ರಿಂದ ೨೨ ರವರೆಗೆ ಹಮ್ಮಿಕೊಂಡಿದ್ದ ಬಿ-ಖಾತಾ ವಿಶೇಷ ಅಭಿಯಾನವನ್ನು ಇದೇ ೨೪ ಮತ್ತು ೨೫ ರವರೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ವಿಸ್ತರಿಸಲಾಗಿದೆ. ಈ ಎರಡೂ ದಿನಗಳು ನಗರದ ೩೧ ವಾರ್ಡುಗಳಲ್ಲಿಯೂ ಅರ್ಜಿ ಸ್ವೀಕಾರ ಕೇಂದ್ರಗಳು ಕಾರ್ಯನಿರ್ವಹಿಸಲಿವೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

೩. ಧರ್ಮಸ್ಥಳಕ್ಕೆ ತೆರಳುತ್ತಿದ್ದ ಪಾದಚಾರಿಗಳ ಮೇಲೆ ಖಾಸಗಿ ಬಸ್ ಹರಿದು ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಹಾಸನ ತಾಲ್ಲೂಕಿನ ಕೆಂಚಟ್ಟಹಳ್ಳಿ ಬಳಿ ಇಂದು ಮುಂಜಾನೆ ಸಂಭವಿಸಿದೆ. ಘಟನಾ ಸ್ಥಳಕ್ಕೆ ಶಾಂತಿಗ್ರಾಮ ಪೊಲೀಸ್ ಠಾಣೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

೪. ಮಾದಕ ವಸ್ತುಗಳ ಕಳ್ಳಸಾಗಣೆ ಮತ್ತು ಮಾರಾಟ ತಡೆಗೆ ಕೈಗೊಂಡ ಕ್ರಮಗಳ ಭಾಗವಾಗಿ ಕಳೆದ ಜನವರಿ ತಿಂಗಳಲ್ಲಿ ೪೦ ಮಾದಕ ವಸ್ತುಗಳ ಸೇವನಾ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

********ಮುಕ್ತಾಯ********